# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಮಂಗಳವಾರ, ೧೦, ಸೆಪ್ಟೆಂಬರ್, ೨೦೨೪(ಭಾದ್ರಪದ, ೧೯, ಶಕವರ್ಷ, ೧೯೪೬)<br>BENGALURU, TUESDAY, 10, SEPTEMBER, 2024(BHADRAPADA, 19, SHAKAVARSHA, 1946) | ನಂ. ೪೩೮<br>No.438 |
|---|---|---|

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಸಿ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ ಸಡಿಲಿಸುವ ಕುರಿತು.

**ಪ್ರಸ್ತಾವನೆ:**

ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಡಿ ಮತ್ತು ಗ್ರೂಪ್-ಸಿ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸರ್ಕಾರಕ್ಕೆ ಮನವಿ ಸಲ್ಲಿಸಿ, ಕರ್ನಾಟಕ ರಾಜ್ಯದಲ್ಲಿ ಕೋವಿಡ್ 19 ಸಾಂಕ್ರಾಮಿಕ ರೋಗ ಮತ್ತು ಇತರೆ ಕಾರಣದಿಂದ ಮತ್ತು ಪದೇ ಪದೇ ಲಾಕ್ ಡೌನ್ ಆಗಿದ್ದರಿಂದ ವಿವಿಧ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ನೇಮಕಾತಿಯನ್ನು ಸರ್ಕಾರವು ಮುಂದೂಡುತ್ತಾ ಬಂದಿರುತ್ತದೆ. ಇದರಿಂದ ಅಭ್ಯರ್ಥಿಗಳ ವಯೋಮಿತಿ ಹೆಚ್ಚಾಗಿದ್ದು ಹುದ್ದೆಗಳ ನೇಮಕಾತಿಯಿಂದ ವಂಚಿತರಾಗಿ ನಿರುದ್ಯೋಗಿಗಳಾಗಿರುವುದರಿಂದ ರಾಜ್ಯ ಸರ್ಕಾರದ ನೇರ ನೇಮಕಾತಿಯಲ್ಲಿ ಪ್ರಸ್ತುತ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಸಡಿಲಿಸುವಂತೆ ಕೋರಿರುತ್ತಾರೆ.

ಗರಿಷ್ಠ ವಯೋಮಿತಿಯನ್ನು ಹೆಚ್ಚಿಸುವ ಕುರಿತು ಸ್ವೀಕರಿಸಲಾಗಿರುವ ಮನವಿಗಳನ್ನು ಪರಿಶೀಲಿಸಿದ್ದು, ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ ಸಡಿಲಿಕೆಯನ್ನು ಒಂದು ಬಾರಿಗೆ ಮಾತ್ರ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 166 ಸೇನೆನಿ 2024,**
**ಬೆಂಗಳೂರು, ದಿನಾಂಕ:10.09.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ಇಲಾಖೆಗಳ ಗ್ರೂಪ್-ಸಿ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈಗಾಗಲೇ ಹೊರಡಿಸಲಾಗಿರುವ ಅಧಿಸೂಚನೆಗಳಿಗೆ ಹಾಗೂ ಮುಂದಿನ ಒಂದು ವರ್ಷದಲ್ಲಿ ಹೊರಡಿಸಲಿರುವ ಅಧಿಸೂಚನೆಗಳಿಗೆ ಸಂಬಂಧಿಸಿದಂತೆ ಎಲ್ಲಾ ಪ್ರವರ್ಗಗಳ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಅಭ್ಯರ್ಥಿಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ (One time measure) ಗರಿಷ್ಠ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆಯನ್ನು ನೀಡಿ ಆದೇಶಿಸಿದೆ.

ಈ ಆದೇಶವನ್ನು ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ: 474/2024 ದಿನಾಂಕ:05.09.2024ರಲ್ಲಿನ ನಿರ್ಣಯದಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH